DECCAN HERALD
Friday
February 4, 2022

# Docs perform first blood group ABO incompatible renal surgery

UDUPI, DHNS

Kasturba Hospital, Manipal, performed the first-ever blood group ABO- incompatible renal transplant on a 14 year-old boy who suffered from renal failure and was on hemodialysis for the past six months.

The teenager with blood group O positive from Shivamogga suffered kidney failure three years ago. Chronic kidney disease had progressed to advanced stages within two years, resulting in reduced physical activity and stunted growth.

When the boy's health deteriorated, he was referred to the department of Pediatric Nephrology in Kasturba Hospital, Manipal for treatment. After evaluating the boy, the family was counselled about the available treatment options.



Doctors of Kasturba Hospital in Manipal performed the first-ever blood group ABO incompatible renal transplant on a 14 year-old boy who was on hemodialysis for the past six months.

The family opted for kidney transplantation with father as potential kidney donor and a matched blood group. But on evaluation father was found to be diabetic and was ineligible to donate his kidney. Mother whose blood group was B positive came forward for kidney donation and opted for ABO incompatible transplant.

"Such transplant requires removal of preformed antibodies from the child's blood by plasmapheresis and use of additional immunosuppression drugs prior to transplant. Following completion of the necessary protocols, the child underwent an ABO-incompatible renal transplant on January 4," Professor and Head of Department of Nephrology Dr Shankar Prasad N informed.

"The child was discharged on Day 10 with a well functioning kidney. The total cost was borne under state and central Government funds which reduced the economic burden on family," Kasturba Hospital Superintendent Dr Avinash Shetty said.

THE TIMES OF INDIA, MANGALURU
FRIDAY, FEBRUARY 4, 2022

# Boy gets kidney despite incompatible blood group

TIMES NEWS NETWORK

**Manipal:** The Kasturba Hospital has performed its first blood group ABO-incompatible renal transplant on a child who had renal failure and was on hemodialysis for the last six months.

A 14-year-old boy with O +ve blood from Shivamogga had a kidney failure three years ago. The disease progressed to an advanced stage in two years, resulting in reduced physical activity. The child was referred to the Department of Paediatric Nephrology at Kasturba Hospital, Manipal.

The family chose kidney transplantation. The father was the potential organ donor with a matching blood group. However, he was detected to be diabetic and could not be the donor.

**The boy's father was the potential donor but was found to be diabetic. His mother then decided to donate a kidney**

The mother, whose blood group was B +ve, came forward to donate a kidney and opted for an ABO-incompatible transplant.

Such transplants require removal of preformed antibodies from the child's blood by plasmapheresis and the use of additional immunosuppression drugs before a transplant. The child underwent an ABO-incompatible renal transplant on January 4 with the support of Dr Arun Chawla, head of the department of urology, and his team and Dr Shamee Shastry, head of the department of transfusion medicine, and her team.

The child was discharged on Day 10 with a functioning kidney.

Dr Shankar Prasad N, the head of the department of nephrology, said that early recognition, timely intervention, and long-term care are required for children with kidney disease.

Dr Dharshan Rangaswamy, a paediatric nephrologist, said that one of the major hurdles for kidney transplantation is finding a suitable donor and blood group incompatibility is a barrier in this.

4-2-2022
UDAYAVANI - MANIPAL

## ಮಣಿಪಾಲ ಕಸ್ತೂರ್ಬಾ ಆಸ್ಪತ್ರೆ

# ಹೊಂದಾಣಿಕೆಯಿಲ್ಲದ ಮೂತ್ರಪಿಂಡ ಕಸಿ ಯಶಸ್ವಿ

ಮಣಿಪಾಲ, ಫೆ. 3: ಮೂತ್ರಪಿಂಡದ ವೈಫಲ್ಯ ಹೊಂದಿದ್ದಮತ್ತು 6 ತಿಂಗಳಿಂದ ಹಿಮೋಡಯಾಲಿಸಿಸ್‌ನಲ್ಲಿರುವ ಮಗುವಿಗೆ ಮೊದಲ ಬಾರಿಗೆ ರಕ್ತದ ಗುಂಪು ಎಬಿಒ-ಹೊಂದಾಣಿಕೆಯಾಗದ ಮೂತ್ರಪಿಂಡ ಕಸಿಯನ್ನು ಇಲ್ಲಿನ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಯಶಸ್ವಿಯಾಗಿ ಮಾಡಲಾಗಿದೆ.

ಶಿವಮೊಗ್ಗದ 'ಒ' ಪಾಸಿಟಿವ್ ರಕ್ತದ ಗುಂಪಿನ 14 ವರ್ಷದ ಬಾಲಕನಿಗೆ 3 ವರ್ಷಗಳ ಹಿಂದೆ ಕಿಡ್ನಿ ವೈಫಲ್ಯ ಪತ್ತೆಯಾಗಿತ್ತು. ಮುಂದಿನ ಎರಡು ವರ್ಷಗಳಲ್ಲಿ ಸಮಸ್ಯೆ ಉಲ್ಬಣಗೊಂಡು ದೈಹಿಕ ಬೆಳವಣಿಗೆ, ಚಟುವಟಿಕೆ ಕಡಿಮೆಯಾದ ಕಾರಣ ಹೆಚ್ಚಿನ ಆರೈಕೆಗಾಗಿ ಮಣಿಪಾಲ ಆಸ್ಪತ್ರೆಯ ಮಕ್ಕಳ ಮೂತ್ರಪಿಂಡ ವಿಭಾಗಕ್ಕೆ ಶಿಫಾರಸು ಮಾಡಲಾಯಿತು.

ವೈದ್ಯರು ಸಲಹೆಯಂತೆ ರಕ್ತದ ಗುಂಪು ಹೊಂದಾಣಿಕೆ ನೆಲೆಯಲ್ಲಿ ಕುಟುಂಬವು ತಂದೆಯ ಮೂತ್ರಪಿಂಡವನ್ನೇ ಕಸಿ ಮಾಡುವುದೆಂದು ತೀರ್ಮಾನಿಸಿತು. ಪರೀಕ್ಷೆ ವೇಳೆ ತಂದೆಗೆ ಮಧುಮೇಹ ಪತ್ತೆಯಾದ ನೆಲೆಯಲ್ಲಿ ಕಿಡ್ನಿ ದಾನ ಸಾಧ್ಯವಾಗಲಿಲ್ಲ. 'ಬಿ' ಪಾಸಿಟಿವ್ ರಕ್ತದ ಗುಂಪು ಹೊಂದಿದ್ದ ತಾಯಿ ಮೂತ್ರಪಿಂಡ ದಾನಕ್ಕೆ ಮುಂದೆ ಬಂದರು. ಎಬಿಒ-ಹೊಂದಾಣಿಕೆಯಿಲ್ಲದ ಕಸಿಗೆ ಆಯ್ಕೆ ಮಾಡಿಕೊಳ್ಳಲಾಯಿತು. ಅಂತಹ ಕಸಿಗೆ ಪ್ಲಾಸ್ಮಾಫೆರೆಸಿಸ್ ಮೂಲಕ ಮಗುವಿನ ರಕ್ತದಿಂದ ಪೂರ್ವ ನಿರ್ಧರಿತ ಪ್ರತಿಕಾಯಗಳನ್ನು ತೆಗೆದುಹಾಕುವುದು ಮತ್ತು ಕಸಿ ಮಾಡುವ ಮೊದಲು ಹೆಚ್ಚುವರಿ



ಇಮ್ಯುನೊಸಪ್ರೆಶನ್ ಔಷಧಗಳ ಬಳಕೆ ಅಗತ್ಯವಿದೆ.

ಅಗತ್ಯ ನೀತಿ ನಿಯಮಗಳನ್ನು ಪೂರ್ಣಗೊಳಿಸಿದ ಅನಂತರ, ಮಗುವಿಗೆ ಮೂತ್ರಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ। ಅರುಣ್ ಚಾವ್ಲಾ ಮತ್ತು ಅವರ ತಂಡ ಹಾಗೂ ಟ್ರಾನ್ಸ್‌ಫ್ಯೂಷನ್ ಮೆಡಿಸಿನ್ ವಿಭಾಗದ ಮುಖ್ಯಸ್ಥೆ ಡಾ। ಶಮೀ ಶಾಸ್ತ್ರಿ ಮತ್ತು ಅವರ ತಂಡದ ಸಹಕಾರದೊಂದಿಗೆ ಜ. 4ರಂದು ಎಬಿಒ-ಹೊಂದಾಣಿಕೆಯಿಲ್ಲದ ಮೂತ್ರಪಿಂಡ ಕಸಿ ಮಾಡಲಾಯಿತು. ಕಿಡ್ನಿ ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದರಿಂದ ಮರುದಿನವೇ ಬಾಲಕನನ್ನು ಬಿಡುಗಡೆ ಮಾಡಲಾಯಿತು. ಪ್ರಸ್ತುತ ತಾಯಿ-ಮಗ ಪೂರ್ಣ ಆರೋಗ್ಯವಾಗಿದ್ದಾರೆ. ಮೂತ್ರಪಿಂಡ ಕಸಿಯ ವೆಚ್ಚವನ್ನು ರಾಜ್ಯ, ಕೇಂದ್ರ ಸರಕಾರದ ನಿಧಿ ಭರಿಸಿದೆ.

ಮೂತ್ರಪಿಂಡ ವಿಭಾಗದ ಮುಖ್ಯಸ್ಥ ಡಾ। ಶಂಕರ್ ಪ್ರಸಾದ್ ಎನ್. ಅವರು, ಮೂತ್ರಪಿಂಡದ ಕಾಯಿಲೆ ಇರುವ ಮಕ್ಕಳಿಗೆ ಆರಂಭಿಕ ಗುರುತಿಸುವಿಕೆ, ಸಮಯೋಚಿತ ಚಿಕಿತ್ಸೆ ಮತ್ತು ದೀರ್ಘಾವಧಿಯ ಆರೈಕೆ ಅಗತ್ಯವಿದೆ ಎಂದು ತಿಳಿಸಿದ್ದಾರೆ.

**ಮಕ್ಕಳಲ್ಲಿ ಕಿಡ್ನಿ ಕಸಿಯೇ ಸೂಕ್ತ**

ಅಗಾಧವಾದ ಬೆಳವಣಿಗೆಯ ಸಾಮರ್ಥ್ಯ ಹೊಂದಿರುವ ಮಕ್ಕಳಲ್ಲಿ, ಮೂತ್ರಪಿಂಡ ಕಸಿ ಡಯಾಲಿಸಿಸ್‌ಗಿಂತ ಉತ್ತಮವಾದ ಆಯ್ಕೆಯಾಗಿದೆ, ಅದು ಉತ್ತಮ ಗುಣಮಟ್ಟದ ಜೀವನವನ್ನು ಒದಗಿಸುತ್ತದೆ. ಮಕ್ಕಳಲ್ಲಿ, ಎಬಿಒ ಹೊಂದಾಣಿಕೆಯಾಗದ ಕಸಿ ಮಾಡುವಿಕೆ, ರಕ್ತದ ಗುಂಪುಗಳು ಹೊಂದಾಣಿಕೆಯಾಗದಿದ್ದಾಗ ಕಸಿಗೆ ಸಾಕಷ್ಟು ತರಬೇತಿ, ಪರಿಣತಿಯ ಅಗತ್ಯವಿದೆ ಎಂದು ಮಕ್ಕಳ ಮೂತ್ರಪಿಂಡ ವಿಭಾಗದ ತಜ್ಞ ಡಾ। ದರ್ಶನ್ ರಂಗಸ್ವಾಮಿ ಅಭಿಪ್ರಾಯಪಟ್ಟರು.

ಕಸ್ತೂರ್ಬಾ ಆಸ್ಪತ್ರೆಯಲ್ಲಿ ಹೊಸದಾಗಿ ರೂಪುಗೊಂಡಿರುವ ಮಕ್ಕಳ ಮೂತ್ರಪಿಂಡ ವಿಭಾಗವು ಮಕ್ಕಳ ಎಲ್ಲ ಸಂಕೀರ್ಣ ಮೂತ್ರಪಿಂಡಗಳಿಗೆ ಸಂಬಂಧಿಸಿದ ಕಾಯಿಲೆಗಳನ್ನು ನಿರ್ವಹಿಸಲು ಸುಸಜ್ಜಿತವಾಗಿದೆ. ಡಯಾಲಿಸಿಸ್, ಮೂತ್ರಪಿಂಡದ ಬಯಾಪ್ಸಿ, ಕಿಡ್ನಿ ಕಸಿ ಸೌಲಭ್ಯ ಆಸ್ಪತ್ರೆಯಲ್ಲಿದ್ದು ಕರಾವಳಿ, ಮಧ್ಯ ಕರ್ನಾಟಕದ ರೋಗಿಗಳಿಗೆ ಅಗತ್ಯವಿರುವ ಎಲ್ಲ ಚಿಕಿತ್ಸೆಯನ್ನು ಒದಗಿಸುತ್ತಿದೆ ಎಂದು ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ। ಅವಿನಾಶ ಶೆಟ್ಟಿ ತಿಳಿಸಿದ್ದಾರೆ.

ಪ್ರಜಾವಾಣಿ
ಶುಕ್ರವಾರ • ಫೆಬ್ರುವರಿ 4, 2022

# ಮಣಿಪಾಲ ಕೆಎಂಸಿ ಆಸ್ಪತ್ರೆಯ ವೈದ್ಯರ ಸಾಧನೆ

## ಬಾಲಕನಿಗೆ ಹೊಂದಾಣಿಕೆಯಾಗದ ರಕ್ತದ ಗುಂಪು: ಯಶಸ್ವಿ ಮೂತ್ರಪಿಂಡ ಕಸಿ

ಪ್ರಜಾವಾಣಿ ವಾರ್ತೆ

ಉಡುಪಿ: ಮಣಿಪಾಲದ ಕಸ್ತೂರ ಬಾ ಆಸ್ಪತ್ರೆಯಲ್ಲಿ ಮೂತ್ರಪಿಂಡ ವೈಫಲ್ಯವಾಗಿ ಆರು ತಿಂಗಳಿಂದ ಹಿಮೋ-ಡಯಾಲಿಸಿಸ್‌ನಲ್ಲಿದ್ದ ಬಾಲಕನಿಗೆ ಹೊಂದಾಣಿಕೆಯಾಗದ (ಎಬಿಒ) ರಕ್ತದ ಗುಂಪಿನ ಮೂತ್ರಪಿಂಡ ಕಸಿಯನ್ನು ಯಶಸ್ವಿಯಾಗಿ ಮಾಡಲಾಯಿತು.

ಶಿವಮೊಗ್ಗದ 'ಒ' ಪಾಸಿಟಿವ್ ರಕ್ತದ ಗುಂಪಿನ 14 ವರ್ಷದ ಬಾಲಕನಿಗೆ 3 ವರ್ಷಗಳ ಹಿಂದೆ ಕಿಡ್ನಿ ವೈಫಲ್ಯವಾಗಿತ್ತು. ಬಾಲಕನ ಅನಾರೋಗ್ಯ ಮತ್ತಷ್ಟು ಹದಗೆಟ್ಟು ದೈಹಿಕ ಬೆಳವಣಿಗೆ ಹಾಗೂ ಚಟುವಟಿಕೆ ಕುಂಠಿತವಾಗಿತ್ತು. ಆಸ್ಪತ್ರೆಯ ಮಕ್ಕಳ ಮೂತ್ರಪಿಂಡ ವಿಭಾಗಕ್ಕೆ ಬಾಲಕನನ್ನು ದಾಖಲಿಸಿಕೊಂಡು ಪರಿಶೀಲಿಸಿ ಚಿಕಿತ್ಸಾ ಆಯ್ಕೆಗಳ ಬಗ್ಗೆ ಕುಟುಂಬಕ್ಕೆ ಸಲಹೆ ನೀಡಲಾಯಿತು.

ಮೂತ್ರಪಿಂಡ ದಾನಿ ಮತ್ತು ರಕ್ತದ ಹೊಂದಾಣಿಕೆಯ ಗುಂಪಿನಂತೆ ತಂದೆಯ ಮೂತ್ರಪಿಂಡ ಕಸಿ ಮಾಡಲು ನಿರ್ಧರಿಸಲಾಯಿತು. ಆದರೆ, ತಂದೆಗೆ ಮಧುಮೇಹ ಇದ್ದಿದ್ದರಿಂದ ಕಿಡ್ನಿಯನ್ನು ಪಡೆಯಲಾಗಲಿಲ್ಲ. 'ಬಿ' ಪಾಸಿಟಿವ್ ರಕ್ತದ ಗುಂಪು ಹೊಂದಿರುವ ತಾಯಿ ಮೂತ್ರಪಿಂಡ ದಾನಕ್ಕೆ ಮುಂದಾದರು. ಅಂತಿಮವಾಗಿ ಎಬಿಒ-ಹೊಂದಾಣಿಕೆಯಿಲ್ಲದ ಕಸಿ ಮಾಡಲು ನಿರ್ಧರಿಸಲಾಯಿತು.

ಮೂತ್ರಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಅರುಣ್ ಚಾವ್ಲಾ ಹಾಗೂ ತಂಡ ಟ್ರಾನ್ಸ್‌ಫ್ಯೂಷನ್ ಮೆಡಿಸಿನ್ ವಿಭಾಗದ ಮುಖ್ಯಸ್ಥೆ ಡಾ.ಶಮಿ ಶಾಸ್ತ್ರಿ ಹಾಗೂ ತಂಡದ ಸಹಕಾರದೊಂದಿಗೆ ಜ.4ರಂದು ಎ ಬಿ ಒ -ಹೊಂದಾಣಿಕೆಯಿಲ್ಲದ ಮೂತ್ರಪಿಂಡವನ್ನು ಯಶಸ್ವಿಯಾಗಿ ಕಸಿ ಮಾಡಲಾಯಿತು. ಬಾಲಕನ ಕಿಡ್ನಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಗಿದೆ.

ಮೂತ್ರಪಿಂಡ ಕಸಿಯ ವೆಚ್ಚವನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರದ ನಿಧಿಯಿಂದ ಭರಿಸಲಾಗಿದ್ದು, ಕುಟುಂಬದ ಆರ್ಥಿಕ ಹೊರೆಯನ್ನು ಗಣನೀಯವಾಗಿ ತಗ್ಗಿಸಲಾಗಿದೆ ಎಂದು ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ತಿಳಿಸಿದ್ದಾರೆ.

ಈಚೆಗೆ ಮಕ್ಕಳಲ್ಲಿ ಮೂತ್ರಪಿಂಡದ ಕಾಯಿಲೆ ಮತ್ತು ವೈಫಲ್ಯ ಹೆಚ್ಚುತ್ತಿದ್ದು, ಆರಂಭಿಕ ಹಂತದಲ್ಲಿ ಕಾಯಿಲೆಯನ್ನು ಗುರುತಿಸಿ ಸಮಯೋಚಿತ ಚಿಕಿತ್ಸೆ ಹಾಗೂ ದೀರ್ಘಾವಧಿಯ ಆರೈಕೆ ಮಾಡುವುದು ಅಗತ್ಯವಿರುತ್ತದೆ. ಮೂತ್ರಪಿಂಡ ವೈಫಲ್ಯ ರೋಗಿಗಳಿಗೆ ಡಯಾಲಿಸಿಸ್ ಮತ್ತು ಮೂತ್ರಪಿಂಡ ಕಸಿಯಿಂದ ಮಾತ್ರ ಜೀವ ಉಳಿಸಬಹುದಾಗಿದೆ ಎಂದು ಮೂತ್ರಪಿಂಡ ವಿಭಾಗದ ಮುಖ್ಯಸ್ಥ ಡಾ.ಶಂಕರ್ ಪ್ರಸಾದ್ ಹೇಳಿದರು.

ಮಕ್ಕಳಿಗೆ ಡಯಾಲಿಸಿಸ್‌ಗಿಂತ ಮೂತ್ರಪಿಂಡ ಕಸಿ ಉತ್ತಮ ಆಯ್ಕೆಯಾಗಿದ್ದು, ರಕ್ತದ ಗುಂಪಿನ ಹೊಂದಾಣಿಕೆ ಆಗದಿದ್ದರೆ ಮೂತ್ರಪಿಂಡ ದಾನಕ್ಕೆ ಸಮಸ್ಯೆಯಾಗುತ್ತದೆ. ಈ ಸಮಸ್ಯೆಯನ್ನು ಈಚೆಗೆ ಪರಿಣಾಮಕಾರಿಯಾಗಿ ನಿವಾರಿಸಲಾಗುತ್ತಿದೆ. ರಕ್ತದ ಗುಂಪುಗಳು ಹೊಂದಿಕೆಯಾಗದಿದ್ದರೂ ಮೂತ್ರಪಿಂಡ ಕಸಿ ಮಾಡಬಹುದಾಗಿದೆ ಎಂದು ಮೂತ್ರಪಿಂಡ ವಿಭಾಗದ ತಜ್ಞ ಡಾ. ದರ್ಶನ್ ರಂಗಸ್ವಾಮಿ ಹೇಳಿದರು.

ಮಕ್ಕಳಿಗೆ ಡಯಾಲಿಸಿಸ್, ಮೂತ್ರಪಿಂಡ ಬಯಾಪ್ಸಿ ಮತ್ತು ಕಿಡ್ನಿ ಕಸಿ ಸೌಲಭ್ಯವು ಮಣಿಪಾಲದ ಕಸ್ತೂರಬಾ ಆಸ್ಪತ್ರೆಯಲ್ಲಿ ಲಭ್ಯವಿದ್ದು ಕರಾವಳಿ ಮತ್ತು ಮಧ್ಯ ಕರ್ನಾಟಕದ ರೋಗಿಗಳಿಗೆ ಅಗತ್ಯವಿರುವ ಚಿಕಿತ್ಸೆ ನೀಡುತ್ತಿದೆ ಎಂದು ಡಾ.ಅವಿನಾಶ ಶೆಟ್ಟಿ ತಿಳಿಸಿದ್ದಾರೆ.



ಮಣಿಪಾಲದ ಕಸ್ತೂರಬಾ ಆಸ್ಪತ್ರೆಯಲ್ಲಿ ಮೂತ್ರಪಿಂಡ ವೈಫಲ್ಯವಾಗಿ ಆರು ತಿಂಗಳಿಂದ ಹಿಮೋಡಯಾಲಿಸಿಸ್‌ನಲ್ಲಿದ್ದ ಬಾಲಕನಿಗೆ ಹೊಂದಾಣಿಕೆಯಾಗದ (ಎಬಿಒ) ರಕ್ತದ ಗುಂಪು ಮೂತ್ರಪಿಂಡ ಕಸಿಯನ್ನು ಯಶಸ್ವಿಯಾಗಿ ಮಾಡಲಾಯಿತು.

**ಮುಖ್ಯಾಂಶಗಳು**

- ಕರಾವಳಿ ಭಾಗದಲ್ಲಿ ಮೊದಲ ಯಶಸ್ವಿ ಪ್ರಯೋಗ
- ಬಾಲಕನ ಆರೋಗ್ಯದಲ್ಲಿ ಚೇತರಿಕೆ: ಬಿಡುಗಡೆ
- ರಕ್ತದ ಗುಂಪು ಹೊಂದಾಣಿಕೆಯಾಗಿದ್ದರೂ ಯಶಸ್ವಿ ಮೂತ್ರಪಿಂಡ ಕಸಿ

# ರಕ್ತದ ಗುಂಪು ಹೊಂದಾಣಿಕೆಯಿಲ್ಲದ ಮೂತ್ರಪಿಂಡ ಕಸಿ ಯಶಸ್ವಿ

## ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯ ವೈದ್ಯರಿಂದ ಕರಾವಳಿಯಲ್ಲಿ ಪ್ರಪ್ರಥಮ ಸಾಧನೆ

• **ಕನ್ನಡಪ್ರಭ ವಾರ್ತೆ** ಮಣಿಪಾಲ

ಕರಾವಳಿ ಜಿಲ್ಲೆಯಲ್ಲಿ ಪ್ರಪ್ರಥಮ ಬಾರಿಗೆ, ರಕ್ತದ ಗುಂಪು ಹೊಂದಾಣಿಕೆಯಾಗದ ಮೂತ್ರಪಿಂಡ ಕಸಿಯನ್ನು ಇಲ್ಲಿನ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಯಶಸ್ವಿಯಾಗಿ ಮಾಡಲಾಗಿದೆ.

ಶಿವಮೊಗ್ಗದ 14 ವರ್ಷದ ಓ ಪಾಸಿಟಿವ್ ರಕ್ತದ ಬಾಲಕ, 3 ವರ್ಷಗಳಿಂದ ಕಿಡ್ನಿ ವೈಫಲ್ಯದಿಂದ ಬಳಲುತಿದ್ದ. ಚಿಕಿತ್ಸೆಗಾಗಿ ಕಸ್ತೂರ್ಬಾ ಆಸ್ಪತ್ರೆಗೆ ದಾಖಲಾಗಿದ್ದ ಬಾಲಕನಿಗೆ 6 ತಿಂಗಳಿಂದ ಹಿಮೋಡಯಾಲಿಸಿಸ್ ಮಾಡಲಾಗುತ್ತಿತ್ತು. ಆತನ ತಂದೆ ಕಿಡ್ನಿ ದಾನಕ್ಕೆ ಮುಂದೆ ಬಂದರಾದರೂ, ಅವರ ಮಧುಮೇಹದಿಂದ ಸಾಧ್ಯವಾಗಲಿಲ್ಲ. ತಾಯಿ ಮುಂದೆ ಬಂದರೂ ಅವರದ್ದು ಬಿ ಪಾಸಿಟಿವ್ ರಕ್ತದ ಗುಂಪಾಗಿತ್ತು.

ಕೊನೆಗೆ ಪ್ಲಾಸ್ಮಾಫೆರೆಸಿಸ್ ಚಿಕಿತ್ಸೆಯ ಮೂಲಕ, ಮಕ್ಕಳ ಮೂತ್ರಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.



ಅರುಣ್ ಚಾವ್ಲಾ ಮತ್ತವರ ತಂಡ, ಟ್ರಾನ್ಸ್‌ಫ್ಯೂಷನ್ ಮೆಡಿಸಿನ್ ವಿಭಾಗದ ಮುಖ್ಯಸ್ಥೆ ಡಾ. ಶಮೀ ಶಾಸ್ತ್ರಿ ಮತ್ತವರ ತಂಡವು ಜ.4ರಂದು, ತಾಯಿಯ ಹೊಂದಾಣಿಕೆಯಿಲ್ಲದ ಮೂತ್ರಪಿಂಡ ಕಸಿ ಮಾಡಿದರು. ಇದೀಗ ಬಾಲಕ ಚೇತರಿಸಿಕೊಂಡಿದ್ದು, ಆಸ್ಪತ್ರೆಯಿಂದ ಬಿಡುಗಡೆಗೊಂಡಿದ್ದಾನೆ.

ಈ ಮೂತ್ರಪಿಂಡ ಕಸಿಯ ವೆಚ್ಚವನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರದ ನಿಧಿಯಿಂದ ಭರಿಸಲಾಗಿದೆ. ಡಾ. ದರ್ಶನ್ ರಂಗಸ್ವಾಮಿ ನೇತೃತ್ವದಲ್ಲಿ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಹೊಸದಾಗಿ ರೂಪುಗೊಂಡ ಮಕ್ಕಳ ಮೂತ್ರಪಿಂಡ ವಿಭಾಗವು, ಮಕ್ಕಳಲ್ಲಿನ ಎಲ್ಲಾ ಸಂಕೀರ್ಣ ಮೂತ್ರಪಿಂಡಗಳಿಗೆ ಸಂಬಂಧಿಸಿದ ಕಾಯಿಲೆಗಳನ್ನು ನಿರ್ವಹಿಸಲು ಸುಸಜ್ಜಿತವಾಗಿದೆ. ಕರಾವಳಿ ಮತ್ತು ಮಧ್ಯ ಕರ್ನಾಟಕದ ರೋಗಿಗಳಿಗೆ ಅಗತ್ಯವಿರುವ ಎಲ್ಲಾ ಚಿಕಿತ್ಸೆಯನ್ನು ಒದಗಿಸುತ್ತಿದೆ ಎಂದು ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರಾದ ಡಾ. ಅವಿನಾಶ ಶೆಟ್ಟಿ ಅವರು ಹೇಳಿದ್ದಾರೆ.

ಕನ್ನಡಪ್ರಭ Fri, 04 February 2022
https://kpepaper.asianetnews.com/c/66020635

**Vijayavani**

**04th February 2022**

# ಕೆಎಂಸಿಯಲ್ಲಿ ಹೊಂದಾಣಿಕೆಯಿಲ್ಲದ ರಕ್ತದ ಗುಂಪಿನ ಮೂತ್ರಪಿಂಡ ಕಸಿ

ಉಡುಪಿ: ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಶಿವಮೊಗ್ಗದ ಓ ಪಾಸಿಟಿವ್ ರಕ್ತದ ಗುಂಪಿನ 14 ವರ್ಷದ ಬಾಲಕನಿಗೆ ಬಿ ಪಾಸಿಟಿವ್ ರಕ್ತದ ಗುಂಪು ಹೊಂದಿದ್ದ ತಾಯಿ ಮೂತ್ರಪಿಂಡವನ್ನು ಜ.4ರಂದು ಯಶಸ್ವಿಯಾಗಿ ಕಸಿ ಮಾಡಲಾಗಿದ್ದು, ನಂತರ ಕಿಡ್ನಿ ಉತ್ತಮವಾಗಿ ಕಾರ್ಯನಿರ್ವಹಿಸಿದ್ದರಿಂದ ಮಗುವನ್ನು ಆಸ್ಪತ್ರೆಯಿಂದ ಬಿಡುಗಡೆಗೊಳಿಸಲಾಗಿದೆ.

ಬಾಲಕನಿಗೆ3 ವರ್ಷ ಹಿಂದೆ ಕಿಡ್ನಿ ವೈಫಲ್ಯವಾಗಿರುವುದು ಪತ್ತೆಯಾಗಿತ್ತು. ದೀರ್ಘಕಾಲದ ಮೂತ್ರಪಿಂಡ ಕಾಯಿಲೆ ಪರಿಣಾಮವಾಗಿ ಬಾಲಕನ ದೈಹಿಕ ಬೆಳವಣಿಗೆ ಮತ್ತು ಚಟುವಟಿಕೆ ಕಡಿಮೆಯಾಗಿದ್ದು, ಕಸ್ತೂರ್ಬಾ ಆಸ್ಪತ್ರೆಯಲ್ಲಿ ಆರು ತಿಂಗಳಿಂದ ಹಿಮೋಡಯಾಲಿಸಿಸ್ ಚಿಕಿತ್ಸೆ ನೀಡಲಾಗಿತ್ತು. ನಂತರ ಮೊಟ್ಟಮೊದಲ ಬಾರಿಗೆ ರಕ್ತದ ಗುಂಪು ಎಬಿಒ ಹೊಂದಾಣಿಕೆಯಾಗದ ಮೂತ್ರಪಿಂಡ ಕಸಿ ಮಾಡಲಾಗಿದೆ. ತಾಯಿ ಮೂತ್ರಪಿಂಡ ಪಡೆದು ಪ್ಲಾಸ್ಮಾಫೆರೆಸಿಸ್ ಮೂಲಕ ಮಗುವಿನ ರಕ್ತದಿಂದ ಪೂರ್ವನಿರ್ಧರಿತ ಪ್ರತಿಕಾಯಗಳನ್ನು ತೆಗೆದು ಕಸಿ ಮಾಡುವ ಮೊದಲು ಹೆಚ್ಚುವರಿ ಇಮ್ಯುನೊಸಪ್ರೆಶನ್ ಔಷಧಗಳ ಬಳಕೆ ಮಾಡಿ ಅಗತ್ಯ ನೀತಿ ನಿಯಮಗಳನ್ನು ಪೂರ್ಣಗೊಳಿಸಲಾಗಿದೆ.

ಮೂತ್ರಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಅರುಣ್ ಚಾವ್ಲಾ, ಟ್ರಾನ್ಸ್‌ಫ್ಯೂಷನ್ ಮೆಡಿಸಿನ್ ವಿಭಾಗದ ಮುಖ್ಯಸ್ಥೆ ಡಾ. ಶಮೀ ಶಾಸ್ತ್ರಿ ಮತ್ತು ಇತರ ವೈದ್ಯರ ತಂಡ ಯಶಸ್ವಿಯಾಗಿ ಶಸ್ತ್ರಚಿಕಿತ್ಸೆ ನಡೆಸಿದೆ. ಮೂತ್ರಪಿಂಡ ಕಸಿ ವೆಚ್ಚವನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರದ ಆರೋಗ್ಯ ನಿಧಿಯಿಂದ ಭರಿಸಲಾಗಿದೆ. ಮೂತ್ರಪಿಂಡ ತಜ್ಞ ಡಾ. ದರ್ಶನ್ ರಂಗಸ್ವಾಮಿ ನೇತೃತ್ವದಲ್ಲಿ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಹೊಸದಾಗಿ ರೂಪುಗೊಂಡ ಮಕ್ಕಳ ಮೂತ್ರಪಿಂಡ ವಿಭಾಗ ಮಕ್ಕಳಲ್ಲಿನ ಎಲ್ಲ ಸಂಕೀರ್ಣ ಕಾಯಿಲೆಗಳನ್ನು ನಿರ್ವಹಿಸಲು ಸುಸಜ್ಜಿತವಾಗಿದೆ ಎಂದು ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ ಶೆಟ್ಟಿ ಹೇಳಿದ್ದಾರೆ.

**Hai Karavali**

**04th February 2022**

# ಕೆಎಂಸಿ ಆಸ್ಪತ್ರೆಯಲ್ಲಿ ಮೊದಲ ಬಾರಿಗೆ ರಕ್ತದ ಗುಂಪು ಎಬಿಒ-ಹೊಂದಾಣಿಕೆಯಾಗದ ಮೂತ್ರಪಿಂಡ ಕಸಿ



ಮಣಿಪಾಲ, ಕಸ್ತೂರ್ಬಾ ಆಸ್ಪತ್ರೆಯು ಮೂತ್ರಪಿಂಡದ ವೈಫಲ್ಯವನ್ನು ಹೊಂದಿದ್ದ ಮತ್ತು ಕಳೆದ ಆರು ತಿಂಗಳಿಂದ ಹಿಮೋಡಯಾಲಿಸಿಸ್ ನಲ್ಲಿರುವ ಮಗುವಿಗೆ ಮೊಟ್ಟ ಮೊದಲ ಬಾರಿಗೆ ರಕ್ತದ ಗುಂಪು ಎಬಿಒ – ಹೊಂದಾಣಿಕೆಯಾಗದ ಮೂತ್ರಪಿಂಡ ಕಸಿ ಮಾಡಿತು. ಶಿವಮೊಗ್ಗದ ಒ ಪಾಸಿಟಿವ್ ರಕ್ತದ ಗುಂಪಿನ 14 ವರ್ಷದ ಬಾಲಕನಿಗೆ 3 ವರ್ಷಗಳ ಹಿಂದೆ ಕಿಡ್ನಿ ವೈಫಲ್ಯವಾಗಿರುವುದು ಪತ್ತೆಯಾಗಿತ್ತು. ದೀರ್ಘಕಾಲದ ಮೂತ್ರಪಿಂಡ ಕಾಯಿಲೆಯು ಮುಂದಿನ ಎರಡು ವರ್ಷಗಳಲ್ಲಿ ಇನ್ನಷ್ಟು ಪ್ರಗತಿ ಹೊಂದಿತು. ಇದರ ಪರಿಣಾಮವಾಗಿ ಬಾಲಕನ ದೈಹಿಕ ಬೆಳವಣಿಗೆ ಮತ್ತು ಚಟುವಟಿಕೆ ಕಡಿಮೆಯಾಯಿತು. ಹೆಚ್ಚಿನ ಆರೈಕೆಗಾಗಿ ಮಗುವನ್ನು ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯ ಮಕ್ಕಳ ಮೂತ್ರಪಿಂಡ ವಿಭಾಗಕ್ಕೆ ಶಿಫಾರಸು ಮಾಡಲಾಯಿತು. ಮಗುವನ್ನು ಮೌಲ್ಯಮಾಪನ ಮಾಡಿದ ನಂತರ, ಲಭ್ಯವಿರುವ ಚಿಕಿತ್ಸಾ ಆಯ್ಕೆಗಳ ಬಗ್ಗೆ ಕುಟುಂಬಕ್ಕೆ ಸಲಹೆ ನೀಡಲಾಯಿತು. ಕುಟುಂಬವು ಸಂಭಾವ್ಯ ಮೂತ್ರಪಿಂಡ ದಾನಿ ಮತ್ತು ರಕ್ತದ ಹೊಂದಾಣಿಕೆಯ ಗುಂಪಿನಂತೆ ತಂದೆಯ ಮೂತ್ರಪಿಂಡ ಕಸಿ ಮಾಡುವಿಕೆಯನ್ನು ಆಯ್ಕೆ ಮಾಡಿಕೊಂಡಿತು. ಆದಾಗ್ಯೂ, ಮೌಲ್ಯಮಾಪನದಲ್ಲಿ ತಂದೆಗೆ ಮಧುಮೇಹ ಇರುವುದು ಪತ್ತೆಯಾಯಿತು ಮತ್ತು ಕಿಡ್ನಿ ದಾನಿಯಾಗಿ ಸ್ವೀಕರಿಸಲು ಸಾಧ್ಯವಾಗಲಿಲ್ಲ. ಬಿ ಪಾಸಿಟಿವ್ ರಕ್ತದ ಗುಂಪು ಹೊಂದಿದ್ದ ತಾಯಿ ಮೂತ್ರಪಿಂಡ ದಾನಕ್ಕೆ ಮುಂದೆ ಬಂದರು ಆದ್ದರಿಂದ ಎಬಿಒ – ಹೊಂದಾಣಿಕೆಯಿಲ್ಲದ ಕಸಿಗೆ ಆಯ್ಕೆ ಮಾಡಿಕೊಳ್ಳಲಾಯಿತು. ಅಂತಹ ಕಸಿಗೆ ಪ್ಲಾಸ್ಮಾಫೆರೆಸಿಸ್ ಮೂಲಕ ಮಗುವಿನ ರಕ್ತದಿಂದ ಪೂರ್ವನಿರ್ಧರಿತ ಪ್ರತಿಕಾಯಗಳನ್ನು ತೆಗೆದುಹಾಕುವುದು ಮತ್ತು ಕಸಿ ಮಾಡುವ ಮೊದಲು ಹೆಚ್ಚುವರಿ ಇಮ್ಯುನೊಸಪ್ರೆಶನ್ ಔಷಧಿಗಳ ಬಳಕೆ ಅಗತ್ಯವಿರುತ್ತದೆ. ಅಗತ್ಯ ನೀತಿ ನಿಯಮಗಳನ್ನು ಪೂರ್ಣಗೊಳಿಸಿದ ನಂತರ, ಮಗುವಿಗೆ ಮೂತ್ರಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಅರುಣ್ ಚಾವ್ಲಾ ಮತ್ತು ಅವರ ತಂಡ ಹಾಗೂ ಟ್ರಾನ್ಸ್ಫ್ಯೂಷನ್ ಮೆಡಿಸಿನ್ ವಿಭಾಗದ ಮುಖ್ಯಸ್ಥರಾದ ಡಾ. ಶಮೀ ಶಾಸ್ತ್ರಿ ಮತ್ತು ಅವರ ತಂಡದ ಸಹಕಾರದೊಂದಿಗೆ ಎಬಿಒ –ಹೊಂದಾಣಿಕೆಯಿಲ್ಲದ ಮೂತ್ರಪಿಂಡ ಕಸಿ ಮಾಡಲಾಯಿತು. ನಂತರ 10ನೇ ದಿನದಂದು ಕಿಡ್ನಿ ಉತ್ತಮವಾಗಿ ಕಾರ್ಯನಿರ್ವಹಿಸಿದ್ದರಿಂದ ಮಗುವನ್ನು ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಯಿತು. ಕುಟುಂಬವು ಬಾಲಕನ ಆರೋಗ್ಯ ಫಲಿತಾಂಶದಿಂದ ಅತ್ಯಂತ ತೃಪ್ತರಾಗಿದ್ದರು, ಏಕೆಂದರೆ ತಾಯಿ–ಮಗ ಜೋಡಿಯು ಪೂರ್ಣ ಆರೋಗ್ಯದೊಂದಿಗೆ ನಿಯಮಿತವಾದ ಅನುಸರಣಾ ಭೇಟಿಗಾಗಿ ಆಸ್ಪತ್ರೆಗೆ ಬರುತ್ತಿರುವುದನ್ನು ನಾವು ನೋಡಿದೆವು. ಮೂತ್ರಪಿಂಡ ಕಸಿಯ ವೆಚ್ಚವನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರದ ನಿಧಿಯಿಂದ ಭರಿಸಲಾಯಿತು. ಇದು ಕುಟುಂಬದ ಆರ್ಥಿಕ ಹೊರೆಯನ್ನು ಗಣನೀಯವಾಗಿ ಕಡಿಮೆ ಮಾಡಿತು. ಕಳೆದ ಕೆಲವು ವರ್ಷಗಳಿಂದ ಮಕ್ಕಳಲ್ಲಿ ಮೂತ್ರಪಿಂಡದ ಕಾಯಿಲೆ ಮತ್ತು ವೈಫಲ್ಯದ ಸಂಭವವು ಹೆಚ್ಚುತ್ತಿದೆ. ಮೂತ್ರಪಿಂಡದ ಕಾಯಿಲೆ ಇರುವ ಮಕ್ಕಳಿಗೆ ಆರಂಭಿಕ ಗುರುತಿಸುವಿಕೆ, ಸಮಯೋಚಿತ ಚಿಕಿತ್ಸೆ ಮತ್ತು ದೀರ್ಘಾವಧಿಯ ಆರೈಕೆಯ ಅಗತ್ಯವಿರುತ್ತದೆ. ಮೂತ್ರಪಿಂಡ ವೈಫಲ್ಯದ ರೋಗಿಗಳಿಗೆ ಡಯಾಲಿಸಿಸ್ ಮತ್ತು ಮೂತ್ರಪಿಂಡ ಕಸಿ ಮಾತ್ರ ಜೀವ ಉಳಿಸುವ ಕ್ರಮಗಳಾಗಿವೆ ಎಂದು ಮೂತ್ರಪಿಂಡ ವಿಭಾಗದ ಮುಖ್ಯಸ್ಥರಾದ ಡಾ. ಶಂಕರ್ ಪ್ರಸಾದ್ ಎನ್ ಹೇಳಿದರು. ಅಗಾಧವಾದ ಬೆಳವಣಿಗೆಯ ಸಾಮರ್ಥ್ಯವನ್ನು ಹೊಂದಿರುವ ಮಕ್ಕಳಲ್ಲಿ, ಮೂತ್ರಪಿಂಡ ಕಸಿ ಡಯಾಲಿಸಿಸ್‌ಗಿಂತ ಉತ್ತಮವಾದ ಆಯ್ಕೆಯಾಗಿದೆ ಮತ್ತು ಉತ್ತಮ ಗುಣಮಟ್ಟದ ಜೀವನವನ್ನು ಒದಗಿಸುತ್ತದೆ. ಮೂತ್ರಪಿಂಡ ಕಸಿ ಮಾಡುವಿಕೆಗೆ ಒಂದು ಪ್ರಮುಖ ಅಡಚಣೆಯೆಂದರೆ ಸೂಕ್ತವಾದ ದಾನಿಯನ್ನು ಕಂಡುಹಿಡಿಯುವುದು. ಮರಣಾ ನಂತರದ ದಾನದ ಕಡಿಮೆ ದರಗಳ ಉಪಸ್ಥಿತಿಯಲ್ಲಿ, ಜೀವಂತ ಸಂಬಂಧಿ ದಾನಿಗಳು ಭಾರತೀಯರಲ್ಲಿ ಮೂತ್ರಪಿಂಡದ ಮುಖ್ಯ ಮೂಲವಾಗಿದೆ. ರಕ್ತದ ಗುಂಪಿನ ಅಸಾಮರಸ್ಯವು ಜೀವಂತ ಮೂತ್ರಪಿಂಡ ದಾನಕ್ಕೆ ಪ್ರಮುಖ ತಡೆಗೋಡೆಯಾಗಿದೆ, ಇದನ್ನು ಇತ್ತೀಚೆಗೆ ಪರಿಣಾಮಕಾರಿಯಾಗಿ ನಿವಾರಿಸಲಾಗಿದೆ. ಮಕ್ಕಳಲ್ಲಿ, ಎ ಬಿ ಒ ಹೊಂದಾಣಿಕೆಯಾಗದ ಕಸಿ ಮಾಡುವಿಕೆ, ಅಂದರೆ ರಕ್ತದ ಗುಂಪುಗಳು ಹೊಂದಿಕೆಯಾಗದಿದ್ದಾಗ, ಮೂತ್ರಪಿಂಡ ಕಸಿಗೆ ಸಾಕಷ್ಟು ತರಬೇತಿ ಮತ್ತು ಪರಿಣತಿಯ ಅಗತ್ಯವಿರುತ್ತದೆ ಎಂದು ಮಕ್ಕಳ ಮೂತ್ರಪಿಂಡ ವಿಭಾಗದ ತಜ್ಞರಾದ ಡಾ. ದರ್ಶನ್ ರಂಗಸ್ವಾಮಿ ಅವರು ಹೇಳಿದರು. ಡಾ. ದರ್ಶನ್ ರಂಗಸ್ವಾಮಿ ಅವರ ನೇತೃತ್ವದಲ್ಲಿ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಹೊಸದಾಗಿ ರೂಪುಗೊಂಡ ಮಕ್ಕಳ ಮೂತ್ರಪಿಂಡ ವಿಭಾಗವು, ಮಕ್ಕಳಲ್ಲಿನ ಎಲ್ಲಾ ಸಂಕೀರ್ಣ ಮೂತ್ರಪಿಂಡಗಳಿಗೆ ಸಂಬಂಧಿಸಿದ ಕಾಯಿಲೆಗಳನ್ನು ನಿರ್ವಹಿಸಲು ಸುಸಜ್ಜಿತವಾಗಿದೆ. ಎಲ್ಲಾ ವಯಸ್ಸಿನ ಮಕ್ಕಳಿಗೆ ಡಯಾಲಿಸಿಸ್, ಮೂತ್ರಪಿಂಡದ ಬಯಾಪ್ಸಿ ಮತ್ತು ಕಿಡ್ನಿ ಕಸಿ ಸೌಲಭ್ಯವು ಮಣಿಪಾ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಲಭ್ಯವಿದ್ದು ಕರಾವಳಿ ಮತ್ತು ಮಧ್ಯ ಕರ್ನಾಟಕದ ರೋಗಿಗಳಿಗೆ ಅಗತ್ಯವಿರುವ ಎ ಚಿಕಿತ್ಸೆಯನ್ನು ಒದಗಿಸುತ್ತಿದೆ ಎಂದು ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರಾದ ಡಾ. ಅವಿನಾಶ ಶೆಟ್ಟಿ ಅವ ಹೇಳಿದ್ದಾರೆ.

**Samyuktha Karnataka**

**05th February 2022**

# ಬಾಲಕನಿಗೆ ಯಶಸ್ವಿ ಮೂತ್ರಪಿಂಡ ಕಸಿ



**ಸಂ.ಕ. ಸಮಾಚಾರ, ಉಡುಪಿ**

ಮೂತ್ರಪಿಂಡ ವೈಫಲ್ಯ ಹೊಂದಿದ್ದು, ಕಳೆದ ಸುಮಾರು 6 ತಿಂಗಳಿಂದ ಹಿಮೋಡಯಾಲಿಸಿಸ್‌ನಲ್ಲಿದ್ದ, ರಕ್ತ ಎಬಿಒ ಹೊಂದಾಣಿಕೆಯಾಗದ 14 ವರ್ಷದ ಬಾಲಕನಿಗೆ ಮಣಿಪಾಲ ಕೆಎಂಸಿ ಆಸ್ಪತ್ರೆಯಲ್ಲಿ ಮೂತ್ರಪಿಂಡ ಕಸಿಯನ್ನು ಯಶಸ್ವಿಯಾಗಿ ಮಾಡಲಾಗಿದೆ.

ಶಿವಮೊಗ್ಗದ 'ಒ' ಪಾಸಿಟಿವ್ ರಕ್ತದ ಗುಂಪಿನ 14 ವರ್ಷದ ಬಾಲಕನಿಗೆ 3 ವರ್ಷದ ಹಿಂದೆ ಕಿಡ್ನಿ ವೈಫಲ್ಯ ಕಂಡುಬಂದಿದ್ದು, ದೀರ್ಘಕಾಲದ ಮೂತ್ರಪಿಂಡ ಕಾಯಿಲೆ ಉಲ್ಬಣಗೊಂಡ ಪರಿಣಾಮ ಬಾಲಕನ ದೈಹಿಕ ಬೆಳವಣಿಗೆ ಮತ್ತು ಚಟುವಟಿಕೆಗೆ ಧಕ್ಕೆಯಾಗಿತ್ತು. ಆರೈಕೆಗಾಗಿ ಆತನನ್ನು ಮಣಿಪಾಲದ ಕೆಎಂಸಿ ಆಸ್ಪತ್ರೆಗೆ ಕರೆತರಲಾಗಿದ್ದು, ಆಸ್ಪತ್ರೆಯ ಮಕ್ಕಳ ಮೂತ್ರಪಿಂಡ ವಿಭಾಗದ ತಜ್ಞ ವೈದ್ಯರು ಚಿಕಿತ್ಸೆ ಆಯ್ಕೆ ಬಗ್ಗೆ ಕುಟುಂಬಕ್ಕೆ ಸಲಹೆ ನೀಡಿದ್ದು, ತಂದೆಯ ಮೂತ್ರಪಿಂಡ ಕಸಿ ಮಾಡುವಿಕೆಯನ್ನು ಆಯ್ಕೆ ಮಾಡಿಕೊಳ್ಳಲಾಯಿತು. ಆದರೆ, ತಂದೆಗೆ ಮಧುಮೇಹ ಇದ್ದು, ಅವರ ಕಿಡ್ನಿ ಹೊಂದಾಣಿಕೆ ಆಗಲಿಲ್ಲ. ಹಾಗಾಗಿ ಬಿ ಪಾಸಿಟಿವ್ ರಕ್ತದ ಗುಂಪು ಹೊಂದಿದ್ದ ತಾಯಿಯ ಮೂತ್ರಪಿಂಡ ದಾನಕ್ಕೆ ಮುಂದೆ ಬಂದರು. ಎಬಿಒ ರಕ್ತ ಗುಂಪು ಹೊಂದಾಣಿಕೆ ಇಲ್ಲದ ಕಸಿ ಆಯ್ಕೆ ಮಾಡಿಕೊಂಡು ಅಗತ್ಯ ವೈದ್ಯಕೀಯ ಪ್ರಕ್ರಿಯೆ ಕೈಗೊಳ್ಳಲಾಯಿತು. ಕಳೆದ ಜ.4ರಂದು ಯಶಸ್ವಿ ಮೂತ್ರಪಿಂಡ ಕಸಿ ಮಾಡಲಾಯಿತು.

ಚಿಕಿತ್ಸೆ ಫಲಪ್ರದವಾಗಿದೆ ಎಂದು ಮೂತ್ರಪಿಂಡ ವಿಭಾಗ ಮುಖ್ಯಸ್ಥ ಡಾ. ಶಂಕರ್ ಪ್ರಸಾದ್ ಎನ್. ತಿಳಿಸಿದ್ದಾರೆ. ಚಿಕಿತ್ಸೆಯಲ್ಲಿ ಮೂತ್ರಪಿಂಡ ವಿಭಾಗ ಪ್ರಾಧ್ಯಾಪಕ ಡಾ. ರವೀಂದ್ರ ಪ್ರಭು ಮತ್ತು ಮಕ್ಕಳ ಮೂತ್ರಪಿಂಡ ತಜ್ಞ ಡಾ. ದರ್ಶನ್ ರಂಗಸ್ವಾಮಿ ಸಹಕರಿಸಿದರು.

ವಿಜಯ ಕರ್ನಾಟಕ


ಶುಕ್ರವಾರ,4 ಫೆಬ್ರವರಿ 2022,
ಮಂಗಳೂರು

# ಕೆಎಂಸಿ ಆಸ್ಪತ್ರೆಯಲ್ಲಿ ಬಾಲಕನಿಗೆ ರಕ್ತದ ಗುಂಪು ಹೊಂದಾಣಿಕೆಯಿಲ್ಲದ ಮೂತ್ರಪಿಂಡ ಕಸಿ

**ವಿಕ ಸುದ್ದಿಲೋಕ** ಉಡುಪಿ

ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಮೂತ್ರಪಿಂಡದ ವೈಫಲ್ಯವನ್ನು ಹೊಂದಿದ್ದ ಮತ್ತು ಕಳೆದ ಆರು ತಿಂಗಳಿಂದ ಹಿಮೋಡಯಾಲಿಸಿಸ್‌ನಲ್ಲಿದ್ದ 14 ವರ್ಷದ ಬಾಲಕನಿಗೆ ರಕ್ತದ ಗುಂಪು ಹೊಂದಾಣಿಕೆಯಾಗದ ಮೂತ್ರಪಿಂಡ ಕಸಿಯನ್ನು ಯಶಸ್ವಿಯಾಗಿ ನೆರವೇರಿಸಲಾಗಿದೆ. ಇದು ಕರಾವಳಿಯಲ್ಲಿ ಮೊದಲ ಶಸ್ತ್ರ ಚಿಕಿತ್ಸೆಯಾಗಿದ್ದು, ಮೂತ್ರಪಿಂಡದ ಕಸಿ ಮಾಡಿಸಿಕೊಂಡ ಬಾಲಕ ಹಾಗೂ ದಾನಿ ಬಾಲಕನ ತಾಯಿ ಇಬ್ಬರೂ ಪೂರ್ಣ ಆರೋಗ್ಯದಿಂದ ಇದ್ದಾರೆ ಎಂದು ಆಸ್ಪತ್ರೆಯ ಮೂತ್ರಪಿಂಡ ವಿಭಾಗದ ಮುಖ್ಯಸ್ಥ ಡಾ. ಶಂಕರ್ ಪ್ರಸಾದ್ ಎನ್. ಹೇಳಿದ್ದಾರೆ.

ವಿವರ: ಶಿವಮೊಗ್ಗದ ಒ ಪಾಸಿಟಿವ್ ರಕ್ತದ ಗುಂಪಿನ 14 ವರ್ಷದ ಬಾಲಕನಿಗೆ 3 ವರ್ಷಗಳ ಹಿಂದೆ ಕಿಡ್ನಿ ವೈಫಲ್ಯವಾಗಿತ್ತು. ಹೆಚ್ಚಿನ ಆರೈಕೆಗಾಗಿ ಮಗುವನ್ನು ಮಣಿಪಾಲದ ಕೆಎಂಸಿ ಆಸ್ಪತ್ರೆಯ ಮಕ್ಕಳ ಮೂತ್ರಪಿಂಡ ವಿಭಾಗಕ್ಕೆ ಶಿಫಾರಸು ಮಾಡಲಾಗಿತ್ತು. ಮಗುವನ್ನು ಪರೀಕ್ಷಿಸಿದ ಬಳಿಕ ಒಂದೇ ರಕ್ತದ ಗುಂಪು ಹೊಂದಿರುವ ಬಾಲಕನ ತಂದೆಯ ಮೂತ್ರಪಿಂಡ ಕಸಿಗೆ ನಿರ್ಧರಿಸಲಾಯಿತು. ಆದರೆ ತಂದೆಗೆ ಮಧುಮೇಹ ಇರುವುದು ಪತ್ತೆಯಾದ ಬಳಿಕ ಆ ಪ್ರಯತ್ನ ಕೈ ಬಿಟ್ಟು, ಬಿ ಪಾಸಿಟಿವ್ ರಕ್ತದ ಗುಂಪು ಹೊಂದಿದ್ದ ತಾಯಿಯ ಮೂತ್ರಪಿಂಡವನ್ನು ಅಳವಡಿಸಲು ತೀರ್ಮಾನಿಸಲಾಯಿತು. ಇಂತಹ ಕಸಿಗೆ ಪ್ಲಾಸ್ಮಾಫೆರೆಸಿಸ್ ಮೂಲಕ ಮಗುವಿನ ರಕ್ತದಿಂದ ಪೂರ್ವ ನಿರ್ಧರಿತ ಪ್ರತಿಕಾಯಗಳನ್ನು ತೆಗೆದು ಹಾಕುವುದು ಮತ್ತು ಕಸಿ ಮಾಡುವ ಮೊದಲು ಹೆಚ್ಚುವರಿ ಇಮ್ಯುನೊಸಪ್ರೆಶನ್ ಔಷಧಿಗಳ ಬಳಕೆ ಅಗತ್ಯವಿರುತ್ತದೆ. ಸೂಕ್ತ ಮುನ್ನೆಚ್ಚರಿಕೆಗಳನ್ನು ಪೂರ್ಣಗೊಳಿಸಿದ ನಂತರ ಬಾಲಕನಿಗೆ ಮೂತ್ರಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಅರುಣ್ ಚಾವ್ಲಾ ಮತ್ತು ಅವರ ತಂಡ ಹಾಗೂ ಟ್ರಾನ್ಸ್ಫ್ಯೂಷನ್ ಮೆಡಿಸಿನ್ ವಿಭಾಗದ ಮುಖ್ಯಸ್ಥೆ ಡಾ. ಶಮೀ ಶಾಸ್ತ್ರಿ ಮತ್ತು ಅವರ ತಂಡ ಕಳೆದ ಜ.4 ರಂದು ಬಾಲಕನಿಗೆ ಮೂತ್ರಪಿಂಡದ ಕಸಿಯನ್ನು ಯಶಸ್ವಿಯಾಗಿ ಮಾಡಿದೆ. ನಂತರ 10ನೇ ದಿನದಂದು ಕಿಡ್ನಿ ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದರಿಂದ ಮಗುವನ್ನು ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಗಿತ್ತು.



ಮೂತ್ರಪಿಂಡ ಕಸಿ ಮಾಡಿಕೊಂಡ ಬಾಲಕ ಮತ್ತು ಆತನ ತಂದೆ ತಾಯಿ ಹಾಗೂ ಶಸ್ತ್ರಚಿಕಿತ್ಸೆ ನೆರವೇರಿಸಿದ ವೈದ್ಯರು.

ಕಳೆದ ಕೆಲವು ವರ್ಷಗಳಿಂದ ಮಕ್ಕಳಲ್ಲಿ ಮೂತ್ರಪಿಂಡದ ಕಾಯಿಲೆ ಮತ್ತು ವೈಫಲ್ಯತೆ ಹೆಚ್ಚುತ್ತಿದ್ದು, ಇದನ್ನು ಆರಂಭದಲ್ಲಿಯೇ ಗುರುತಿಸಿ ಸೂಕ್ತ ಚಿಕಿತ್ಸೆ ಮತ್ತು ದೀರ್ಘಾವಧಿಯ ಆರೈಕೆಯ ಅಗತ್ಯವಿದೆ. ಮೂತ್ರಪಿಂಡ ವೈಫಲ್ಯದ ರೋಗಿಗಳಿಗೆ ಡಯಾಲಿಸಿಸ್ ಮತ್ತು ಮೂತ್ರಪಿಂಡ ಕಸಿ ಮಾತ್ರ ಜೀವ ಉಳಿಸುವ ಕ್ರಮಗಳಾಗಿವೆ ಎಂದು ಡಾ. ಶಂಕರ್ ಪ್ರಸಾದ್ ಎನ್. ತಿಳಿಸಿದ್ದಾರೆ. ಡಾ. ದರ್ಶನ್ ರಂಗಸ್ವಾಮಿ ಅವರ ನೇತೃತ್ವದಲ್ಲಿ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಹೊಸದಾಗಿ ಕಾರ್ಯಾರಂಭಗೊಂಡಿರುವ ಮಕ್ಕಳ ಮೂತ್ರಪಿಂಡ ವಿಭಾಗವು, ಮಕ್ಕಳಲ್ಲಿನ ಎಲ್ಲ ಸಂಕೀರ್ಣ ಮೂತ್ರಪಿಂಡಗಳಿಗೆ ಸಂಬಂಧಿಸಿದ ಕಾಯಿಲೆಗಳನ್ನು ನಿರ್ವಹಿಸಲು ಸುಸಜ್ಜಿತವಾಗಿದೆ. ಎಲ್ಲ ವಯಸ್ಸಿನ ಮಕ್ಕಳಿಗೆ ಡಯಾಲಿಸಿಸ್, ಮೂತ್ರಪಿಂಡದ ಬಯಾಪ್ಸಿ ಮತ್ತು ಕಿಡ್ನಿ ಕಸಿ ಸೌಲಭ್ಯ ಇಲ್ಲಿ ಲಭ್ಯವಿದೆ ಎಂದು ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ ಶೆಟ್ಟಿ ತಿಳಿಸಿದ್ದಾರೆ.

**Other Links**:

- **Daijiworld:** https://www.daijiworld.com/news/newsDisplay?newsID=922581
- **Public Next**: https://publicnext.com/article/nid/Udupi/Mangalore/Health-and-Fitness/node=596095
- **Namma Udupi Bulletin**: https://nammaudupibulletin.com/suddigalu/pradeshika/kasturba-hospital-performs-first-successful-pediatric-blood-group-abo-incompatible-renal-transplant/
- **Udupi Express**: https://udupixpress.com/blood-group-incompatible-kidney-transplant-successful-in-manipal-kmc/
- **Jana Prathinidhi:** https://janaprathinidhi.com/?p=10021